ಚಿರತೆಗಳ ಹಾವಳಿಯ ನಿಯಂತ್ರಣಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಚಿರತೆ ಹಾವಳಿ ತಡೆಗಟ್ಟಲು ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಮುಂಜಾಗ್ರತಾ ಕ್ರಮವಾಗಿ ತಮ್ಮ ತಮ್ಮ ವಿಭಾಗಗಳಲ್ಲಿ 3–4 ಜನರನ್ನೊಳಗೊಂಡ ರಕ್ಷಣಾ ಪಡೆಯನ್ನು ರಚಿಸಿ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನಸಂಪರ್ಕ ಸಭೆ ನಡೆಸಲು ಹಾಗೂ ಮುಂಜಾಗ್ರತಾ ಕ್ರಮವಾಗಿ ಹಾವಳಿ ಇರುವ ಕಡೆ ರಾತ್ರಿ ಗಸ್ತು ಮಾಡಲು ಮತ್ತು ಚಿರತೆ ಹಿಡಿಯಲು ಬೇಕಾದ ಬೋನು, Tranquilizer Gun ಮತ್ತಿತರೆ ಉಪಕರಣಗಳನ್ನು ಸಿದ್ದತೆ ಮಾಡಿಕೊಂಡಿರುತ್ತಾರೆ. ಅಲ್ಲದೆ ನಿರಂತರವಾಗಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ವಲಯ ಅರಣ್ಯಾಧಿಕಾರಿಗಳು ಸಾರ್ವಜನಿಕರಿಗೆ ತಿಳುವಳಿಕೆ ನೀಡುವುದಲ್ಲದೇ, ಅದರಲ್ಲೂ ಕಾಡಂಚಿನಲ್ಲಿ ವಾಸಿಸುವ ಜನರಿಗೆ ಹೆಚ್ಚಿನ ತಿಳುವಳಿಕೆ ನೀಡುವಂತೆ ರಾಜ್ಯದ ಎಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಶ್ರೀರಂಗ ಏತ ನೀರಾವರಿ ಯೋಜನೆಗಳು

2013 (2643); ಶ್ರೀ ಹೆಚ್.ಸಿ. ಬಾಲಕೃಷ್ಣ

ಅ) ಹೇಮಾವತಿ ನದಿಯಿಂದ ಮಾಗಡಿಗೆ ನೀರು ಹರಿಸುವ ಶ್ರೀರಂಗ ಏತ ನೀರಾವರಿ ಯೋಜನೆಯ ಟೆಂಡರ್ ಪ್ರಕ್ರಿಯೆ ನಿಧಾನಗತಿ ಆಗಲು ಕಾರಣವೇನು;

ಆ) ಈ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಅನುದಾನವೆಷ್ಟು; ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ;

ಇ) ಕಾಮಗಾರಿಯ ಪ್ರಾರಂಭವನ್ನು ಯಾವಾಗ ಮಾಡಲಾಗುವುದು; ಯಾವ ಕಾಲಮಿತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?

ಶ್ರೀ ಎಂ.ಬಿ. ಪಾಟೀಲ್ (ಮಾನ್ಯ ಜಲ ಸಂಪನ್ಮೂಲ ಸಚಿವರು)

ಅ) ಹೇಮಾವತಿ ಯೋಜನೆ ಅಡಿಯಲ್ಲಿ ತುಮಕೂರು ಶಾಖಾ ನಾಲೆಯ 192.30 ಕಿ.ಮೀ ನಿಂದ ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು ಹಾಗೂ ತುಮಕೂರು ಜಿಲ್ಲೆ, ಕುಣಿಗಲ್ ತಾಲ್ಲೂಕು ಹುತ್ತರಿದುರ್ಗ ಹೋಬಳಿಯ 83 ಕೆರೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಯೋಜನೆಯ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ:ಜಸಂಇ 45 ಎನ್‌ಹೆಚ್‌ಪಿ 2013, ದಿನಾಂಕ:28-02-2014 ರಲ್ಲಿ ₹ 277.50 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಸದರಿ ಕಾಮಗಾರಿಗೆ ದಿನಾಂಕ:22-05-2014 ರಂದು ಎರಡು ಲಕೋಟೆ ಪದ್ಧತಿಯಲ್ಲಿ TURN KEY & PERCENTAGE ಟೆಂಡರ್ ಅನ್ನು ಕಾವೇರಿ ನೀರಾವರಿ ನಿಗಮದಿಂದ ಕರೆಯಲಾಗಿದ್ದು, ಪ್ರೀ-ಬಿಡ್ ಸಭೆಯಲ್ಲಿ ಬಿಡ್‌ದಾರರು Mobilization Advance, Extending the Stipulated Period for Completion, Payment towards PSC/HDPE pipes, Co-Efficient of Resistance to be considered, Elecrtical Scope of work, Specification for VT Pumps, Specification for HT Motors, change of PSC pipes to PVC pipes & H.D.P.E pipes and M.S. pipes ಇತ್ಯಾದಿಗೆ ಸಂಬಂಧಿಸಿದಂತೆ, Queries ಗಳನ್ನು ಸಲ್ಲಿಸಿದ್ದು, ಈ ವಿಷಯಕ್ಕಾಗಿ ತಾಂತ್ರಿಕ ಪರಿಣಿತರಿಂದ ಸಲಹೆಗಳನ್ನು ಪಡೆದು, ಅಗತ್ಯ ತಿದ್ದುಪಡಿಗಳನ್ನು ಮಾಡುವಲ್ಲಿ ವಿಳಂಬವಾಗಿರುತ್ತದೆ.

ಅಂತಿಮ ತಿದ್ದುಪಡಿಯಂತೆ ಟೆಂಡರ್‌ಗಳನ್ನು ಸ್ವೀಕರಿಸುವ ಕೊನೆಯ ದಿನಾಂಕವನ್ನು 27-01-2015 ಕ್ಕೆ ನಿಗದಿಪಡಿಸಲಾಯಿತು. ಟೆಂಡರ್ ಪ್ರಕಟಣೆಯಂತೆ ದಿನಾಂಕ:30-01-2015 ರಂದು ತಾಂತ್ರಿಕ ಬಿಡ್‌ಗಳನ್ನು ತೆರೆಯಲಾಗಿದ್ದು, ಸದರಿ ತಾಂತ್ರಿಕ ಬಿಡ್‌ಅನ್ನು ಕಾವೇರಿ ನೀರಾವರಿ ನಿಗಮದ ಟೆಂಡರ್ ಪರಿಶೀಲನಾ ಸಮಿತಿಯ ಮುಂದೆ ಮಂಡಿಸಲಾಗುತ್ತಿದೆ.

ಅ) ಮತ್ತು ಇ) ಈ ಯೋಜನೆಯ ಅನುಷ್ಠಾನಕ್ಕೆ ಆರ್ಥಿಕ ಬಿಡ್ ತೆರೆದ ನಂತರ ಬೇಕಾಗುವ ಮೊತ್ತ ತಿಳಿದುಬರುತ್ತದೆ. ಕಾವೇರಿ ನಿರಾವರಿ ನಿಗಮಕ್ಕೆ ಹಂಚಿಕೆಯಾದ ಅನುದಾನದ ಲಭ್ಯತೆ ಮೇರೆಗೆ ಈ ಕಾಮಗಾರಿಯನ್ನು ಪ್ರಾರಂಭಿಸಿ 24 ತಿಂಗಳ ಕಾಲಾವಧಿಯಲ್ಲಿ ಪೂರ್ಣಗೊಳಿಸಲಾಗುವುದು.

ಮೇಕೆದಾಟು ಬಳಿ ನಿರ್ಮಿಸುವ ಡ್ಯಾಂ

2014 (3210); ಶ್ರೀ ಹೆಚ್.ಸಿ. ಬಾಲಕೃಷ್ಣ

ಅ) ಮೇಕೆದಾಟು ಬಳಿ ಕಾವೇರಿ ನದಿಗೆ ಅಡ್ಡಲಾಗಿ ಡ್ಯಾಂ ನಿರ್ಮಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಡ್ಯಾಂ ನಿರ್ಮಾಣ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಡ್ಯಾಂ ನಿರ್ಮಾಣ ಮಾಡಿ ಯಾವ್ಯಾವ ಜಿಲ್ಲೆಗಳಿಗೆ ನೀರನ್ನು ಒದಗಿಸಲಾಗುವುದು; (ಯೋಜನೆಯ ಸಂಪೂರ್ಣ ವಿವರಗಳನ್ನು ನೀಡುವುದು)

ಈ) ಕೆ.ಆರ್.ಎಸ್.ನಿಂದ ಮಾರ್ಕೋನಹಳ್ಳಿ ಮಾರ್ಗವಾಗಿ ಮೇಕೆದಾಟಿಗೆ ನೀರು ಹರಿಸುವ ಪ್ರಸ್ತಾವನೆಯು ಸರ್ಕಾರ ಮುಂದಿದೆಯೇ; ಹಾಗಿದ್ದಲ್ಲಿ ಇದು ಯಾವ ಹಂತದಲ್ಲಿದೆ?

ಶ್ರೀ ಎಂ.ಬಿ. ಪಾಟೀಲ (ಮಾನ್ಯ ಜಲ ಸಂಪನ್ಮೂಲ ಸಚಿವರು)

ಅ) ಇಂದ ಇ) ಮೇಕೆದಾಟುವಿನ ಮೇಲ್ಭಾಗದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಸಮತೋಲನ / ಶೇಖರಣಾ ಜಲಾಶಯಗಳನ್ನು ನಿರ್ಮಿಸಲು ಉದ್ದೇಶಿಸಿದೆ. ಈ ನಿಟ್ಟಿನಲ್ಲಿ ತನಿಖೆ, ಸರ್ವೆ, ವಿನ್ಯಾಸ ನಕ್ಷೆ ಹಾಗೂ ಅಂದಾಜುಗಳ ತಯಾರಿಕೆ, ವಿವರವಾದ ಯೋಜನಾ ವರದಿಯ ತಯಾರಿಕೆ ಇತ್ಯಾದಿಗಳಿಗಾಗಿ ಸಮಾಲೋಚಕರನ್ನು ಪೂರ್ವಾರ್ಹತೆಗೊಳಿಸುವ